A-33 A-72 (125)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಎಸ್.ವ್ಹಿ.ಸಂಕನೂರ ಮತ್ತು ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರು ಮಂಡಿಸಿರುವ ನಿಯಮ 330ರ ಸೂಚನೆಗೆ ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರ ಹೇಳಿಕೆ:**

* * *

ವಿಷಯ:- ಪದವಿ ಪೂರ್ವ ಶಿಕ್ಷಣ ಇಲಾಖೆಯ ದಿನಾಂಕ:27-09-2018ರಂದು ಹೊರಡಿಸಿರುವ ಆದೇಶ ಸಂಖ್ಯೆ:ಇಡಿ/107/ಟಿಪಿಯು/2017 ರ ಪ್ರಕಾರ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ತೊಂದರೆಯಾಗುತ್ತಿರುವ ಕುರಿತು.

**ಉತ್ತರ:**

ಪದವಿ ಪೂರ್ವ ಶಿಕ್ಷಣ(ಶೈಕ್ಷಣಿಕ, ನೊಂದಣಿ, ಆಡಳಿತ ಮತ್ತು ಸಹಾಯಾನುದಾನ ಇತ್ಯಾದಿ) 2006ರ ನಿಯಮ 15, 16 ಮತ್ತು 17ರನ್ವಯ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಸದರಿ ನಿಯಮಗಳನ್ನು ಸರ್ಕಾರದಿಂದ ಕಾಲಕಾಲಕ್ಕೆ ಪರಿಷ್ಕರಿಸಲಾಗುತ್ತದೆ.

ಅದರಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 107 ಟಿಪಿಯು 2017 ದಿನಾಂಕ:27-09-2018ರಲ್ಲಿ ಮೇಲಿನ ನಿಯಮಗಳ ನಿಯಮ 14ಕ್ಕೆ ತಿದ್ದುಪಡಿ ತಂದು ಖಾಸಗಿ ಪದವಿ ಪೂರ್ವ ಕಾಲೇಜುಗಳ ವಿಜ್ಞಾನ ವಿಷಯಗಳಿಗೆ ವಾರದಲ್ಲಿ ತಲಾ 24 ಗಂಟೆಗಳು ಹಾಗೂ ಕಲಾ, ವಾಣಿಜ್ಯ ಮತ್ತು ಭಾಷಾ ವಿಷಯಗಳಿಗೆ ವಾರದಲ್ಲಿ ತಲಾ 20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿರುತ್ತದೆ.

ಸದರಿ ಅಧಿಸೂಚನೆನ್ವಯ ನಿಗಧಿತ ಕಾರ್ಯಭಾರ ಹೊಂದಿರುವ ದಿನಾಂಕ:31-12-2015ರೊಳಗೆ ಖಾಲಿಯಾಗಿರುವ ಅನುದಾನಿತ ಉಪನ್ಯಾಸಕರ ಹುದ್ದೆಗಳನ್ನು ನಿಯಮಾನುಸಾರ ತುಂಬಿಕೊಳ್ಳಲು ಆಡಳಿತ ಮಂಡಳಿಗಳಿಗೆ ಅನುಮತಿ ನೀಡಲಾಗುತ್ತಿದೆ.

ನಿಗಧಿತ ಕಾರ್ಯಭಾರ ಹೊಂದಿಲ್ಲದ/ಕೊರತೆ ಇರುವ ಅನುದಾನಿತ ಉಪನ್ಯಾಸಕರ ಖಾಲಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಪೂರ್ಣ ಕಾರ್ಯಭಾರ ಒದಗಿಸಿಕೊಂಡಿರುವ ಬಗ್ಗೆ ಆಡಳಿತ ಮಂಡಳಿಗಳು ಪ್ರಸ್ತಾವನೆ ಸಲ್ಲಿಸಿದಲ್ಲಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮ ಜರುಗಿಸಲಾಗುವುದು.

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಸಂಖ್ಯೆ:ಇಪಿ 64 ಡಿಜಿಡಬ್ಲ್ಯೂ 2021